# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 987
2) ಸದಸ್ಯರ ಹೆಸರು : ಶ್ರೀ ಐವನ್ ಡಿ'ಸೋಜಾ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು)
3) ಉತ್ತರಿಸಬೇಕಾದ ದಿನಾಂಕ : 25-08-2026
4) ಉತ್ತರಿಸಬೇಕಾದ ಸಚಿವರು : ಮುಜರಾಯಿ, ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಮೀನುಗಾರಿಕಾ ವೃತ್ತಿಯಲ್ಲಿ ತೊಡಗಿರುವ ಕುಟುಂಬಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು); | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 5,473 ಕುಟುಂಬಗಳು ಮೀನುಗಾರಿಕೆ ವೃತ್ತಿಯಲ್ಲಿ ತೊಡಗಿರುತ್ತಾರೆ. ತಾಲ್ಲೂಕುವಾರು ವಿವರ ಈ ಕೆಳಗಿನಂತಿದೆ:- |

| ಕ್ರಮ ಸಂಖ್ಯೆ | ತಾಲ್ಲೂಕು | ಕುಟುಂಬಗಳ ಸಂಖ್ಯೆ |
|---|---|---|
| 1 | ಮಂಗಳೂರು | 2,044 |
| 2 | ಉಳ್ಳಾಲ | 1,379 |
| 3 | ಮೂಡಬಿದ್ರೆ | 206 |
| 4 | ಮುಲ್ಕಿ | 1,042 |
| 5 | ಬಂಟ್ವಾಳ | 227 |
| 6 | ಬೆಳ್ತಂಗಡಿ | 174 |
| 7 | ಕಡಬ | 89 |
| 8 | ಪುತ್ತೂರು | 139 |
| 9 | ಸುಳ್ಯ | 173 |
| | **ಒಟ್ಟು** | **5,473** |

| | ಪ್ರಶ್ನೆ | ಉತ್ತರ |
|---|---|---|
| ಆ) | ಕಳೆದ 3 ವರ್ಷಗಳಿಂದ ಈ ಕುಟುಂಬಗಳಿಗೆ ಮಂಜೂರು ಮಾಡಿರುವ ಮನೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು) ಈ ಘಟಕ ವೆಚ್ಚದಲ್ಲಿ ಮನೆಯನ್ನು ನಿರ್ಮಾಣ ಮಾಡಿಕೊಳ್ಳಲು ಸಾಧ್ಯವಿದೆಯೇ; | 2023-24 ಮತ್ತು 2025-26ನೇ ಸಾಲಿನಲ್ಲಿ ಮತ್ಸ್ಯಾಶ್ರಯ ಯೋಜನೆಯಡಿ ಮನೆ ಮಂಜೂರಾಗಿರುವುದಿಲ್ಲ. 2024-25ನೇ ಸಾಲಿನಲ್ಲಿ ನಿರ್ವಸತಿ ಮೀನುಗಾರರ ಕುಟುಂಬಗಳಿಗೆ ಹಂಚಿಕೆ ಮಾಡಿರುವ ಮನೆಗಳ ವಿವರವನ್ನು ಈ ಕೆಳಗೆ ನೀಡಲಾಗಿದೆ. |

| ಕ್ರ ಸಂ | ವಿಧಾನಸಭಾ ಕ್ಷೇತ್ರ | 2024-25ನೇ ಸಾಲಿನಲ್ಲಿ ಹಂಚಿಕೆ ಮಾಡಲಾದ ಮನೆಗಳ ಸಂಖ್ಯೆ |
|---|---|---|
| 1 | ಮಂಗಳೂರು | 125 |
| 2 | ಮಂಗಳೂರು ಉತ್ತರ | 25 |
| 3 | ಮಂಗಳೂರು ದಕ್ಷಿಣ | 25 |
| 4 | ಮೂಡಬಿದ್ರೆ | 25 |
| 5 | ಬಂಟ್ವಾಳ | 50 |
| 6 | ಸುಳ್ಯ | 25 |
| 7 | ಬೆಳ್ತಂಗಡಿ | 25 |
| 8 | ಪುತ್ತೂರು | 125 |
| | **ಒಟ್ಟು** | **425** |

ಮತ್ಸ್ಯಾಶ್ರಯ ಯೋಜನೆಯಡಿ ಪ್ರಸ್ತುತ ಸಾಮಾನ್ಯ ವರ್ಗದ ಫಲಾನು ಭವಿಗಳಿಗೆ ರೂ. 1.20 ಲಕ್ಷ, ಗ್ರಾಮೀಣ ಪ್ರದೇಶದ ಪರಿಶಿಷ್ಟ ಜಾತಿ / ಪಂಗಡದ ಫಲಾನುಭವಿಗಳಿಗೆ ರೂ. 1.75 ಲಕ್ಷ ಮತ್ತು ನಗರ ಪ್ರದೇಶದ ಪರಿಶಿಷ್ಟ ಜಾತಿ /ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ರೂ.2.00 ಲಕ್ಷ ಸಹಾಯಧನವನ್ನು ನೀಡಲಾಗುತ್ತಿದೆ. ಉಳಿದ ಮೊತ್ತವನ್ನು ಫಲಾನುಭವಿಗಳು ಭರಿಸಬೇಕಾಗುತ್ತದೆ.

| | | |
|---|---|---|
| ಇ) | ಪ್ರಸ್ತುತ ಕಟ್ಟಡ ಸಾಮಾಗ್ರಿಗಳ ಬೆಲೆಗಳು ಏರಿಕೆಯಾಗಿರುವುದರಿಂದ ಮನೆಗಳ ಘಟಕ ವೆಚ್ಚವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ಮತ್ಸ್ಯಾಶ್ರಯ ಯೋಜನೆಯಡಿ ಮನೆ ನಿರ್ಮಾಣಕ್ಕಾಗಿ ಸರ್ಕಾರದಿಂದ ನೀಡಲಾಗುವ ಸಹಾಯಧನದ ಮೊತ್ತವನ್ನು ಹೆಚ್ಚಿಸುವ ಪ್ರಸ್ತಾವನೆಯು ಪ್ರಸ್ತುತ ಸರ್ಕಾರದ ಮುಂದಿರುವುದಿಲ್ಲ. |
| ಈ) | ಒಳನಾಡಿನಲ್ಲಿ ಮೀನುಗಾರಿಕೆ ಕುಟುಂಬದವರಿಗೆ ಸೇರಿರುವ ಪ್ರವರ್ಗ-1 ರ ಜಾತಿಗೆ ಸೇರಿರುವ ಮೀನುಗಾರರ ವೃತ್ತಿಯನ್ನು ಹೊಂದಿದವರಿಗೆ ಗುತ್ತಿಗೆಯನ್ನು ನೀಡಲಾಗಿದೆಯೇ; ಗುತ್ತಿಗೆ ನೀಡಿರುವ ಕುಟುಂಬಗಳ ಸಂಖ್ಯೆ ಎಷ್ಟು? (ತಾಲ್ಲೂಕುವಾರು ವಿವರ ನೀಡುವುದು) | ಒಳನಾಡು ಮೀನುಗಾರಿಕೆ ಕಾರ್ಯನೀತಿ, 2014ರ ಪ್ರಕಾರ, ಪ್ರವರ್ಗ-1ರ ಜಾತಿಗೆ ಸೇರಿದ ಹಾಗೂ ಮೀನುಗಾರಿಕೆ ವೃತ್ತಿಯನ್ನು ಅವಲಂಬಿಸಿರುವವರಿಗೆ ಕೆರೆಗಳನ್ನು ನೇರವಾಗಿ ಗುತ್ತಿಗೆ ನೀಡಲು ಅವಕಾಶ ವಿರುವುದಿಲ್ಲ. |

ಸಂಖ್ಯೆ: ಪಸಂಮೀ 108 ಮೀಇಇ 2026

(ಕೆ.ಎಸ್. ಬಸವಂತಪ್ಪ)
ಮುಜರಾಯಿ, ಮೀನುಗಾರಿಕೆ, ಬಂದರು
ಮತ್ತು ಒಳನಾಡು ಜಲಸಾರಿಗೆ ಸಚಿವರು